APRIL 23, 2026

AKASHAVANI - DHARWAD

PRADESH SAAMACHARA (KANNADA) 07.05 A.M

<><><>

ಮುಖ್ಯಾಂಶಗಳು

- ಕೌಶಲ್ಯ ಸಾಮರ್ಥ್ಯ ಹಾಗೂ ನಾವೀನ್ಯತೆ ಕ್ರಿಯೆಗಳೊಂದಿಗೆ, ಸ್ಥಳೀಯ ಉದ್ಯಮ ಬೆಂಬಲಿಸುವತ್ತ ಗಮನಹರಿಸುವಂತೆ ಉಪ ರಾಷ್ಟ್ರಪತಿ ಸಿ.ಪಿ.ರಾಧಾಕೃ ಣ್ಣನ್ ವಿದ್ಯಾರ್ಥಿಗಳಿಗೆ ಕರೆ.
- ಇಂದು ಎಸ್.ಎಸ್.ಎಲ್.ಸಿ ಪರೀಕ್ಷಾ ಫಲಿತಾಂಶ ಪ್ರಕಟ; ಪ್ರಥಮ ಬಾರಿಗೆ ವಿದ್ಯಾರ್ಥಿಗಳ ಫಲಿತಾಂಶದ ಅಂಕಪಟ್ಟಿ ಡಿಜಿಲಾಕರ್ ಮೂಲಕ ಲಭ್ಯ.
- ವೃತ್ತಿಪರ ಕೋರ್ಸ್‌ಗಳ ಸಾಮಾನ್ಯ ಪ್ರವೇಶ ಪರೀಕ್ಷೆ ಇಂದಿನಿಂದ ಆರಂಭ.
- ನಾಳೆಯಿಂದ ಬೆಂಗಳೂರಿನಲ್ಲಿ 3 ದಿನಗಳ ಕಾಲ ಅಂತಾರಾಷ್ಟ್ರೀಯ ಕೃಷಿ ತಂತ್ರಜ್ಞಾನ ಸಮಾವೇಶ;ತಂತ್ರಜ್ಞಾನ, ನಾವಿನ್ಯತೆಯೊಂದಿಗೆ ಕೃಷಿಗೆ ಹೊಸ ಭವಿ ್ಯ ರೂಪಿಸುವ ಉದ್ದೇಶ.

ಈಗ ವಾರ್ತೆಗಳ ವಿವರ

ಬದಲಾವಣೆ ಜಗದ ನಿಯಮ. ಕೌಶಲ್ಯ ಸಾಮರ್ಥ್ಯ ಹೆಚ್ಚಿಸಿಕೊಳ್ಳಬೇಕು. ನಾವೀನ್ಯತೆ ಕ್ರಿಯೆಗಳೊಂದಿಗೆ ಸ್ಥಳೀಯ ಉದ್ಯಮವನ್ನು ಬೆಂಬಲಿಸುವತ್ತ ಹೆಚ್ಚು ಗಮನಹರಿಸಬೇಕು. ಜಾಗತಿಕ ವೇದಿಕೆಯಲ್ಲಿ ಸ್ಪರ್ಧಾತ್ಮಕವಾಗಿರುವ ಪರಿಹಾರಗಳನ್ನು ರಚಿಸುವ ಬಗ್ಗೆ ಹೆಚ್ಚು ಎಚ್ಚರ ವಹಿಸಬೇಕು ಎಂದು ಉಪ ರಾ ್ಟ್ರಪತಿ ಸಿ.ಪಿ.ರಾಧಾಕೃ ್ಣನ್ ವಿದ್ಯಾರ್ಥಿಗಳಿಗೆ ಕರೆ ನೀಡಿದ್ದಾರೆ. ಕಲಬುರಗಿಯ ಕೇಂದ್ರೀಯ ವಿಶ್ವವಿದ್ಯಾಲಯದ 10ನೇ ಘಟಿಕೋತ್ಸವದಲ್ಲಿ ಪಾಲ್ಗೊಂಡು ಮಾತನಾಡಿದ ಅವರು, ಪ್ರಧಾನಮಂತ್ರಿ ನರೇಂದ್ರ ಮೋದಿಯವರ ವಿಕಸಿತ ಭಾರತದ ದೃಷ್ಟಿಕೋನವು ರಾಷ್ಟ್ರೀಯ ಧ್ಯೇಯವಾಗಿದೆ. ಈ ದೃಷ್ಟಿಕೋನವು ಯುವಕರನ್ನು ಮುನ್ನಡೆಸಲು ಮತ್ತು ಸಮಗ್ರತೆಯಿಂದ ಕಾರ್ಯನಿರ್ವಹಿಸಲು ಪ್ರೇರೆಪಿಸುತ್ತದೆ ಎಂದರು.

<><><>

ಎಸ್.ಎಸ್.ಎಲ್.ಸಿ ವಾರ್ಷಿಕ ಪರೀಕ್ಷೆ–1ರ ಫಲಿತಾಂಶ ಇಂದು ಮಧ್ಯಾಹ್ನ 12 ಗಂಟೆಗೆ ಪ್ರಕಟವಾಗಲಿದೆ ಎಂದು ಕರ್ನಾಟಕ ಶಾಲಾ ಪರೀಕ್ಷೆ ಮತ್ತು ಮೌಲ್ಯ ನಿರ್ಣಯ ಮಂಡಳಿ ತಿಳಿಸಿದೆ. ವಿದ್ಯಾರ್ಥಿಗಳು, www. Kar results. nic.in ಜಾಲತಾಣ ಹಾಗೂ ಕರ್ನಾಟಕ ಒನ್ ಮೊಬೈಲ್ ಆ್ಯಪ್ ಮೂಲಕ ಪಡೆಯಬಹುದು. ಅದಲ್ಲದೆ ವಿದ್ಯಾರ್ಥಿಗಳ ನೋಂದಾಯಿತ ಮೊಬೈಲ್ ಸಂಖ್ಯೆಗೆ ವಾಟ್ಸಾಪ್, ಎಸ್.ಎಂ.ಎಸ್ ಮೂಲಕ ಫಲಿತಾಂಶದ ಮಾಹಿತಿಯನ್ನು ರವಾನಿಸಲಾಗುವುದು ಎಂದು ಮಂಡಳಿ ಅಧ್ಯಕ್ಷರು ಪ್ರಕಟಣೆಯಲ್ಲಿ ತಿಳಿಸಿದ್ದಾರೆ.

ಈ ವರ್ಷ ಪ್ರಥಮ ಬಾರಿಗೆ ವಿಶೇಷವಾಗಿ, ವಿದ್ಯಾರ್ಥಿಗಳ ಫಲಿತಾಂಶದ ಅಂಕಪಟ್ಟಿಯನ್ನು, ಡಿಜಿಲಾಕರ್ ಮೂಲಕ ಲಭ್ಯಗೊಳಿಸಲಾಗುವುದು, ಅದನ್ನು ಬಳಸಿ ಅಂಕಪಟ್ಟಿಯನ್ನು ಡೌನ್ ಲೋಡ್ ಮಾಡಿಕೊಳ್ಳಬಹುದು ಎಂದು ಮಂಡಲಿ ತಿಳಿಸಿದೆ. ಪರೀಕ್ಷೆಗಾಗಿ ತಾವು ಪಟ್ಟ ಶ್ರಮದ ಮೇಲೆ ನಂಬಿಕೆಯಿರಲಿ. ಅಂಕಗಳು ಕೇವಲ ಅಂಕಿ–ಅಂಶಗಳಷ್ಟೇ, ಆದರೆ ಜ್ಞಾನ ಮತ್ತು ಪರಿಶ್ರಮ ಶಾಶ್ವತ. ಫಲಿತಾಂಶ ಏನೇ ಇರಲಿ, ಅದನ್ನು ಸಮಚಿತ್ತದಿಂದ ಸ್ವೀಕರಿಸಿ. ಮುಂದಿನ ಶೈಕ್ಷಣಿಕ ಹಂತಕ್ಕೆ ರಾಜ್ಯ ಶಿಕ್ಷಣ ಇಲಾಖೆ ಸದಾ ತಮ್ಮ ಜೊತೆಗಿರುತ್ತದೆ. ಎಲ್ಲರಿಗೂ ಒಳ್ಳೆಯದಾಗಲಿ ಎಂದು ಸಚಿವ ಮಧು ಬಂಗಾರಪ್ಪ ಸಾಮಾಜಿಕ ಜಾಲತಾಣದ ಮೂಲಕ ವಿದ್ಯಾರ್ಥಿಗಳಿಗೆ ಶುಭ ಹಾರೈಸಿದ್ದಾರೆ.

<><><>

ಕರ್ನಾಟಕ ಪರೀಕ್ಷಾ ಪ್ರಾಧಿಕಾರ ನಡೆಸುತ್ತಿರುವ ವೃತ್ತಿಪರ ಕೋರ್ಸ್‌ಗಳ ಪ್ರವೇಶಾತಿಗಾಗಿ ಸಾಮಾನ್ಯ ಪ್ರವೇಶ ಪರೀಕ್ಷೆ ಇಂದು ರಾಜ್ಯಾದ್ಯಂತ ನಡೆಯಲಿದೆ. ಇಂದು ಭೌತಶಾಸ್ತ್ರ ಹಾಗೂ ರಾಸಾಯನಶಾಸ್ತ್ರ, ನಾಳೆ ಜೀವಶಾಸ್ತ್ರ ಮತ್ತು ಗಣಿತ ಪರೀಕ್ಷೆ ನಡೆಯಲಿದೆ. ಈ ಬಾರಿ ಒಟ್ಟು 3 ಲಕ್ಷದ 30 ಸಾವಿರ ವಿದ್ಯಾರ್ಥಿಗಳು ಸಿಇಟಿ ಪರೀಕ್ಷೆ ಬರೆಯಲಿದ್ದಾರೆ. ಪರೀಕ್ಷಾರ್ಥಿಗಳಿಗೆ ಹೊಸ ವಸ್ತ್ರ ಸಂಹಿತೆಯನ್ನು ಜಾರಿಗೆ ತರಲಾಗಿದೆ. ವಿದ್ಯಾರ್ಥಿಗಳು ನಿಗದಿತ ನಿಯಮಾವಳಿಗಳ ಪ್ರಕಾರವೇ ಉಡುಗೆ ಧರಿಸಿ ಪರೀಕ್ಷಾ ಕೇಂದ್ರಗಳಿಗೆ ಆಗಮಿಸುವಂತೆ ಪರೀಕ್ಷಾ ಪ್ರಾಧಿಕಾರ ನಿರ್ದೇಶನ ನೀಡಿದೆ. ಪರೀಕ್ಷಾ ಅಕ್ರಮಗಳನ್ನು ತಡೆಯಲು ನೇಮಕಾತಿ ಪರೀಕ್ಷೆಗಳ ಮಾದರಿಯಲ್ಲೇ ಬಿಗಿ ಭದ್ರತೆ ಕೈಗೊಳ್ಳಲಾಗಿದೆ. ರಾಜ್ಯದ ಎಲ್ಲಾ 745 ಕೇಂದ್ರಗಳಲ್ಲಿ ಸಿಸಿ ಕ್ಯಾಮೆರಾಗಳನ್ನು ಅಳವಡಿಸಲಾಗಿದೆ. ಪರೀಕ್ಷಾ ನಿರ್ವಹಣೆಗಾಗಿ ಯಾವುದೇ ಲೋಪವಾಗದಂತೆ ನೋಡಿಕೊಳ್ಳಲು ಎಲ್ಲಾ ಕೇಂದ್ರಗಳಲ್ಲಿ ವಿಶೇ ' ಅಧಿಕಾರಿಗಳನ್ನು ನಿಯೋಜಿಸಲಾಗಿದೆ.

<><><>

ನಾಳೆಯಿಂದ 3 ದಿನಗಳ ಕಾಲ ಬೆಂಗಳೂರಿನ ಅರಮನೆ ಮೈದಾನ, ತ್ರಿಪುರವಾಸಿನಿ ಯಲ್ಲಿ ಅಂತಾರಾಷ್ಟ್ರೀಯ ಕೃಷಿತಂತ್ರಜ್ಞಾನ ಶೃಂಗ ಸಭೆ ಕಾರ್ಯಕ್ರಮ ಆಯೋಜಿಸಲಾಗಿದೆ. ಶೃಂಗಸಭೆಯನ್ನು ಮುಖ್ಯಮಂತ್ರಿ ಸಿದ್ದರಾಮಯ್ಯ ಉದ್ಘಾಟಿಸಲಿದ್ದಾರೆ ಎಂದು ಎಫ್.ಕೆ ಸಿ.ಸಿ.ಐ ಅಧ್ಯಕ್ಷರಾದ ಉಮಾ ರೆಡ್ಡಿ ತಿಳಿಸಿದ್ದಾರೆ. ಜಾಗತಿಕ ಕೃಷಿ ತಂತ್ರಜ್ಞಾನ ಶೃಂಗ ಸಭೆ 2026 ಇಲ್ಲಿ ವಿಭಿನ್ನ ಪಾಲುದಾರರನ್ನು ಒಂದೇ ವೇದಿಕೆಯ ಮೇಲೆ ಒಗ್ಗೂಡಿಸಲು ಹಾಗೂ ಭೂಮಿ, ಬೀಜ, ವಿಜ್ಞಾನ, ಸಂಶೋಧನೆ, ಕೈಗಾರಿಕೆ ಮತ್ತು ಸರಬರಾಜು ಸರಪಳಿಗಳನ್ನು ಸಂಪರ್ಕಿಸುವ ಜಾಗತಿಕ ವೇದಿಕೆಯಾಗುವಂತೆ ವಿನ್ಯಾಸಗೊಳಿಸಲಾಗಿದೆ. ಕೃಷಿಕರು, ತಂತ್ರಜ್ಞಾನ ಪೂರೈಕೆದಾರರು, ಉದ್ಯಮಗಳು ಮತ್ತು ಸರಕಾರದ ಪ್ರತಿನಿಧಿಗಳು ನೇರವಾಗಿ ಪರಸ್ಪರ ಸಂವಹನ ಮಾಡಬಹುದು ಎಂದರು. ಶೃಂಗ ಸಭೆಯಲ್ಲಿ ಕ್ರಮಬದ್ಧ ಕೃಷಿ, ಕೃಷಿಯಲ್ಲಿ ಕೃತಕ ಬುದ್ಧಿಮತ್ತೆ, ಡ್ರೋನ್–ಆಧಾರಿತ ನಿಗಾವಳಿ, ನೂತನ ಕೃಷಿ ಸಾಧನಗಳು, ಆಧುನಿಕ ತಂತ್ರಜ್ಞಾನಗಳು ಪ್ರದರ್ಶನವಿರುತ್ತದೆ. ಈ ತಂತ್ರಜ್ಞಾನಗಳು ರೈತರಿಗೆ ಆದಾಯ ಹೆಚ್ಚಿಸಲು ಹಾಗೂ ವೆಚ್ಚವನ್ನು ಕಡಿಮೆ ಮಾಡಲು ಹೇಗೆ ನೆರವಾಗುತ್ತದೆ ಎಂಬುದನ್ನು ಸಹ ತಿಳಿಸಿ ಕೊಡಲಾಗುತ್ತದೆ ಎಂದು ಹೇಳಿದರು.

<><><>

ಧಾರವಾಡ ಆಕಾಶವಾಣಿ ಪ್ರಾದೇಶಿಕ ಸುದ್ದಿ ವಿಭಾಗ ಸ್ಥಳಾಂತರಿಸುವ ನಿರ್ಧಾರವನ್ನು ಪ್ರಸಾರ ಭಾರತಿ ಮಂಡಳಿ ಹಿಂತೆಗೆದುಕೊಂಡಿದ್ದು ಉತ್ತರ ಕರ್ನಾಟಕ ಜನರ ಒತ್ತಾಸೆ, ಅಭಿಲಾಷೆಯಂತೆ, ಧಾರವಾಡದಲ್ಲಿರುವ ಆಕಾಶವಾಣಿ ಕೇಂದ್ರ ಮುಂದುವರಿಯಲಿದೆ ಎಂದು ಕೇಂದ್ರ ಸಚಿವ ಪ್ರಲ್ಹಾದ ಜೋಶಿ ತಿಳಿಸಿದ್ದಾರೆ. ಈ ಕುರಿತು ಸಾಮಾಜಿಕ ಜಾಲತಾಣದಲ್ಲಿ ಮಾಹಿತಿ ಹಂಚಿಕೊಂಡಿರುವ ಅವರು, ಧಾರವಾಡ ಆಕಾಶವಾಣಿ ಸುದ್ದಿ ವಿಭಾಗ ಧಾರವಾಡದಲ್ಲೇ ಮುಂದುವರಿಸುವ ಅವಶ್ಯಕತೆ ಬಗ್ಗೆ, ಕೇಂದ್ರ ಮಾಹಿತಿ ಮತ್ತು ಪ್ರಸಾರ ಸಚಿವ ಅಶ್ವಿನಿ ವೈಷ್ಣವ್ ಅವರಿಗೆ, ಮಾಡಿದ ಮನವಿಗೆ, ಸಕಾರಾತ್ಮಕವಾಗಿ ಸ್ಪಂದಿಸಿದ್ದಾರೆ ಎಂದು ಹೇಳಿದರು. ಧಾರವಾಡ ಆಕಾಶವಾಣಿ ಪ್ರಾದೇಶಿಕ ಸುದ್ದಿ ವಿಭಾಗವನ್ನು ಧಾರವಾಡದಲ್ಲೇ ಮುಂದುವರಿಸಲು ಆದೇಶಿಸಿದ ಪ್ರಧಾನಮಂತ್ರಿ ನರೇಂದ್ರ ಮೋದಿ ಹಾಗೂ ಕೇಂದ್ರ ಸಚಿವ ಅಶ್ವಿನಿ ವೈಷ್ಣವ್ ಅವರಿಗೆ ಉತ್ತರ ಕರ್ನಾಟಕದ ಜನತೆಯ ಪರವಾಗಿ ಧನ್ಯವಾದ ಸಲ್ಲಿಸುವುದಾಗಿ ತಿಳಿಸಿದ್ದಾರೆ.

ಉತ್ತರಕರ್ನಾಟಕದ ಜನತೆಯ ಅಸ್ಮಿತೆಯ ಕೇಂದ್ರವಾದ ಧಾರವಾಡದ ಆಕಾಶವಾಣಿ ಕೇಂದ್ರದ ಪ್ರಾದೇಶಿಕ ಸುದ್ದಿ ವಿಭಾಗವು ಧಾರವಾಡದಲ್ಲಿ ಉಳಿಯುವಂತೆ ಪ್ರಯತ್ನಿಸಿದ್ದಕ್ಕೆ ಕೇಂದ್ರ ಸಚಿವರುಗಳಾದ ಪ್ರಲ್ಹಾದ ಜೋಶಿ ಹಾಗೂ ಅಶ್ವಿನಿ ವೈಷ್ಣವ ಅವರಿಗೆ ಕೃತಜ್ಞತೆಗಳನ್ನು ಸಲ್ಲಿಸುವುದಾಗಿ ಕರ್ನಾಟಕ ವಿದ್ಯಾವರ್ಧಕ ಸಂಘದ ಪ್ರಧಾನ ಕಾರ್ಯದರ್ಶಿ ಶಂಕರ ಹಲಗತ್ತಿ ತಿಳಿಸಿದ್ದಾರೆ.

<><><>

ಈಗ ಪ್ರಕಟಣೆ.

ನಂತರ ಪ್ರದೇಶ ಸಮಾಚಾರ ಮುಂದುವರೆಯುವುದು..

<><><>

( 42 ಸೆಕೆಂದುಗಳು)

<><><>

ಪ್ರದೇಶ ಸಮಾಚಾರ ಕೇಳುತ್ತಿದ್ದೀರಿ.

<><><>

ಸ್ವಾಮಿ ವಿವೇಕಾನಂದ ಯೂತ್ ಮೂವ್‌ಮೆಂಟ್ ವತಿಯಿಂದ ಧಾರವಾಡ ಜಿಲ್ಲೆ ಅಳ್ನಾವರ ತಾಲೂಕಿನ ಬೆಣಚಿ ಮತ್ತು ಕಡಬಗಟ್ಟಿ ಗ್ರಾಮ ಪಂಚಾಯಿತಿ ವ್ಯಾಪ್ತಿಯಲ್ಲಿ ಕಳೆದ ಐದು ವರ್ಷಗಳಿಂದ 'ಗ್ರಾಮೀಣ ಸಮುದಾಯಗಳಿಗೆ ಸಮಾನ ಶಿಕ್ಷಣ' ಪ್ರಕಲ್ಪದಡಿಯಲ್ಲಿ, ಅಂಗನವಾಡಿಗಳಲ್ಲಿ ಉತ್ತಮ ಕಲಿಕಾ ವಾತಾವರಣ ನಿರ್ಮಿಸುವ ಮೂಲಕ 3 ರಿಂದ 6 ವರ್ಷದ ಮಕ್ಕಳು ಯಾರೂ ಸಹ ಅಂಗನವಾಡಿಯಿಂದ ಹೊರಗುಳಿಯದಂತೆ ಅನುಸರಣೆ ಮಾಡುವುದು, ಎರಡು ಗ್ರಾಮ ಪಂಚಾಯಿತಿ ವ್ಯಾಪ್ತಿಯಲ್ಲಿ ಇರುವ ವಿಕಲಾಂಗ ಚೇತನ ಮಕ್ಕಳಿಗೂ ಶಿಕ್ಷಣ ಸಿಗುವಂತೆ ಅವಕಾಶ ಕಲ್ಪಿಸುವುದು, ಆರ್ಥಿಕವಾಗಿ ಹಿಂದುಳಿದ ಮಕ್ಕಳಿಗೆ ವಿದ್ಯಾರ್ಥಿ ವೇತನ ಸೌಲಭ್ಯ ಮುಂತಾದ ಯೋಜನೆಗಳನ್ನು ಅನುಷ್ಠಾನಗೊಳಿಸಲಾಗಿದೆ. ಬೆಣಚಿ ಸರ್ಕಾರಿ ಪ್ರೌಢ ಶಾಲೆಯ ಆವರಣದಲ್ಲಿ ವಿಜ್ಞಾನ ಉದ್ಯಾನವನ ನಿರ್ಮಿಸಲಾಗಿದೆ. ಇಂದು ಬೆಳಿಗ್ಗೆ 10 ಗಂಟೆಗೆ ಧಾರವಾಡ ಜಿಲ್ಲಾಧಿಕಾರಿ ಸ್ನೇಹಲ್ ಆರ್. ವಿಜ್ಞಾನ ಉದ್ಯಾನವನವನ್ನು ಲೋಕಾರ್ಪಣೆ ಮಾಡಲಿದ್ದಾರೆ. ಈ ಕುರಿತು ಪ್ರದೇಶ ಸಮಾಚಾರಕ್ಕಾಗಿ ಹೆಚ್ಚಿನ ಮಾಹಿತಿ ನೀಡಿದ್ದಾರೆ, ಸ್ವಾಮಿ ವಿವೇಕಾನಂದ ಯೂತ್ ಮೂವ್‌ಮೆಂಟ್ ಪ್ರಾದೇಶಿಕ ಮುಖ್ಯಸ್ಥರಾದ ಜಯಂತ ಕೆ.ಎಸ್.

<><><>

ಧ್ವನಿ–ಕೆ.ಎಸ್.ಜಯಂತ( 56 ಸೆಕೆಂದುಗಳು)

<><><>

24ನೇ ರಾಷ್ಟ್ರೀಯ ಅಥ್ಲೆಟಿಕ್ಸ್ ಜೂನಿಯರ್ ಚಾಂಪಿಯನ್ ಶಿಪ್ ತುಮಕೂರಿನ ಮಹಾತ್ಮಗಾಂಧಿ ಕ್ರೀಡಾಂಗಣದಲ್ಲಿ ನಾಳೆಯಿಂದ ಆರಂಭವಾಗಿ 3 ದಿನಗಳ ಕಾಲ ನಡೆಯಲಿದೆ ಎಂದು ಗೃಹ ಖಾತೆ ಸಚಿವ ಹಾಗೂ ಕರ್ನಾಟಕ ಅಥ್ಲಟಿಕ್ಸ್ ಅಸೋಸಿಯೇ 'ನ್ ಅಧ್ಯಕ್ಷರಾದ ಡಾಕ್ಟರ್ ಜಿ.ಪರಮೇಶ್ವರ್ ತಿಳಿಸಿದ್ದಾರೆ. ತುಮಕೂರಿನಲ್ಲಿ ಸುದ್ದಿಗಾರರಿಗೆ ಈ ಮಾಹಿತಿ ನೀಡಿದ ಅವರು, ತುಮಕೂರಿನಂತಹ ನಗರದಲ್ಲಿ ಇದೇ ಮೊದಲ ಬಾರಿಗೆ ಅಥ್ಲೆಟಿಕ್ಸ್ ಜೂನಿಯರ್ ಕ್ರೀಡಾಕೂಟ ಆಯೋಜನೆಗೆ ಅವಕಾಶ ದೊರಕಿದ್ದು, ಮುಂದಿನ ದಿನಗಳಲ್ಲಿ ರಾಷ್ಟ್ರೀಯ ಕ್ರೀಡಾಕೂಟಗಳನ್ನು ಆಯೋಜಿಸಲು ಸಹಕಾರಿಯಾಗಲಿದೆ. ಅಥ್ಲೆಟಿಕ್ಸ್ ಜೂನಿಯರ್ ಚಾಂಪಿಯನ್ ಶಿಫ್‌ನಲ್ಲಿ ಆಯ್ಕೆಯಾಗುವ ಕ್ರೀಡಾಪಟುಗಳು ಅಮೇರಿಕಾದ ಓರೆಂಗಾನ್ ನಲ್ಲಿ ನಡೆಯಲ್ಲಿರುವ ವಿಶ್ವ ಅಥ್ಲೆಟಿಕ್ಸ್ ಕ್ರೀಡಾಕೂಟದಲ್ಲಿ ಭಾರತ ತಂಡವನ್ನು ಪ್ರತಿನಿಧಿಸಲಿದ್ದಾರೆ ಎಂದು ತಿಳಿಸಿದರು.

<><><>

ಪ್ರಧಾನಮಂತ್ರಿ ನರೇಂದ್ರ ಮೋದಿ ಅವರ, ಆಕಾಶವಾಣಿಯ, ಬಹುಶ್ರುತ, ಮನ್ ಕಿಬಾತ್ ಕಾರ್ಯಕ್ರಮದ, 133 ನೇ ಆವೃತ್ತಿ, ಇದೇ ತಿಂಗಳ 26 ರಂದು ಭಾನುವಾರ, ಬೆಳಗ್ಗೆ 11 ಗಂಟೆಗೆ, ಪ್ರಸಾರವಾಗಲಿದೆ. ಜನತೆ ತಮ್ಮ ಅನಿಸಿಕೆ ಅಭಿಪ್ರಾಯಗಳನ್ನು, ನಮೋ ಆ್ಯಪ್ ಮೈ ಗೌವ್ ಓಪನ್ ಫೋರಂ ಅಥವಾ ಉಚಿತ ಸಹಾಯವಾಣಿ – 1800–11–7800 ಮೂಲಕ, ಹಂಚಿಕೊಳ್ಳಲು ನಾಳೆ ಕೊನೆಯ ದಿನವಾಗಿದೆ.

<><><>

ಧಾರವಾಡ ಜಿಲ್ಲಾಡಳಿತ ಹಾಗೂ ಕನ್ನಡ ಮತ್ತು ಸಂಸ್ಕೃತಿ ಇಲಾಖೆಯ ಸಹಯೋಗದಲ್ಲಿ, ಇಂದು ಬೆಳಗ್ಗೆ 11 ಗಂಟೆಗೆ ಮಹರ್ಷಿ ಶ್ರೀ ಭಗೀರಥ ಜಯಂತಿಯನ್ನು ಧಾರವಾಡದ ಕರ್ನಾಟಕ ಕುಲಪುರೋಹಿತ ಆಲೂರು ವೆಂಕಟರಾವ ಸಭಾಭವನದಲ್ಲಿ ಆಯೋಜಿಸಲಾಗಿದೆ ಎಂದು ಕನ್ನಡ ಮತ್ತು ಸಂಸ್ಕೃತಿ ಇಲಾಖೆಯ ಸಹಾಯಕ ನಿರ್ದೇಶಕರಾದ ಕುಮಾರ ಬೆಕ್ಕೇರಿ ಪ್ರಕಟಣೆಯಲ್ಲಿ ತಿಳಿಸಿದ್ದಾರೆ.

<><><>

ಕೊನೆಯಲ್ಲಿ ಮತ್ತೊಮ್ಮೆ ಮುಖ್ಯಾಂಶಗಳು

- ಕೌಶಲ್ಯ ಸಾಮರ್ಥ್ಯ ಹಾಗೂ ನಾವೀನ್ಯತೆ ಕ್ರಿಯೆಗಳೊಂದಿಗೆ, ಸ್ಥಳೀಯ ಉದ್ಯಮ ಬೆಂಬಲಿಸುವತ್ತ ಗಮನಹರಿಸುವಂತೆ ಉಪ ರಾಷ್ಟ್ರಪತಿ ಸಿ.ಪಿ.ರಾಧಾಕೃ ್ಣನ್ ವಿದ್ಯಾರ್ಥಿಗಳಿಗೆ ಕರೆ.
- ಇಂದು ಎಸ್.ಎಸ್.ಎಲ್.ಸಿ ಪರೀಕ್ಷಾ ಫಲಿತಾಂಶ ಪ್ರಕಟ; ಪ್ರಥಮ ಬಾರಿಗೆ ವಿದ್ಯಾರ್ಥಿಗಳ ಫಲಿತಾಂಶದ ಅಂಕಪಟ್ಟಿ ಡಿಜಿಲಾಕರ್ ಮೂಲಕ ಲಭ್ಯ.
- ವೃತ್ತಿಪರ ಕೋರ್ಸ್‌ಗಳ ಸಾಮಾನ್ಯ ಪ್ರವೇಶ ಪರೀಕ್ಷೆ ಇಂದಿನಿಂದ ಆರಂಭ.
- ನಾಳೆಯಿಂದ ಬೆಂಗಳೂರಿನಲ್ಲಿ 3 ದಿನಗಳ ಕಾಲ ಅಂತಾರಾಷ್ಟ್ರೀಯ ಕೃಷಿ ತಂತ್ರಜ್ಞಾನ ಸಮಾವೇಶ;ತಂತ್ರಜ್ಞಾನ, ನಾವಿನ್ಯತೆಯೊಂದಿಗೆ ಕೃಷಿಗೆ ಹೊಸ ಭವಿ ್ಯ ರೂಪಿಸುವ ಉದ್ದೇಶ.

ಇಲ್ಲಿಗೆ ಪ್ರದೇಶ ಸಮಾಚಾರ ಮುಕ್ತಾಯವಾಯಿತು.

ನಮ್ಮ ಮುಂದಿನ ರಾಷ್ಟ್ರೀಯ ವಾರ್ತಾ ಪ್ರಸಾರ 7 ಗಂಟೆ 35 ನಿಮಿಷಕ್ಕೆ.

<><><>